# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 276 | ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 | ಚಿತ್ರದುರ್ಗ | ದಿನಾಂಕ: 24–05–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 276 | Title- Code: KARKAN 28269 | Chitradurga | Date: 24-05-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕಾಂಗ್ರೆಸ್‌ನಿಂದ ದೇಶದ ಸಮಗ್ರ ಅಭಿವೃದ್ಧಿ: ಎ.ಜಾಕೀರ್ ಹುಸೇನ್ 2

ಕೀಟಜನ್ಯ ರೋಗ ನಿಯಂತ್ರಣ ಜಾಗೃತಿ ಮೂಡಿಸಿ; ಎಡಿಸಿ 3

ಮಾದಿಗ ಸಮುದಾಯ ಅಭಿವೃದ್ಧಿ ಕಾಣಲು ಬೌದ್ಧ ಧರ್ಮದ ಸಿದ್ದಂತ ಅಳವಡಿಸಿಕೊಳ್ಳಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಶಿಕ್ಷಣ ಇಲಾಖೆಯಲ್ಲಿ ಒನ್‌ವೇ ಆಡಳಿತ

» **ಚಿತ್ರದುರ್ಗ**

ರಾಜ್ಯದಲ್ಲಿ ಶಿಕ್ಷಣ ಇಲಾಖೆಯಲ್ಲಿ ಒನ್‌ವೇ ಟ್ರಾಫಿಕ್ ನಡೆಯುತ್ತಿದೆ ಎಂದು ಮಾಜಿ ಎಂಎಲ್‌ಸಿ ಅರುಣ್ ಶಹಾಪುರ್ ಆರೋಪಿಸಿದರು.

ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತಾಡಿದ ಅವರು, ಶಿಕ್ಷಣದ ಹಿತ ದೃಷ್ಟಿಯಿಂದ ಮೂರು ಬಾರಿ ಗೆದ್ದಿರುವ ವೈ.ಎ.ನಾರಾಯಣಸ್ವಾಮಿ ಅವರನ್ನು ಈ ಬಾರಿ ಗೆಲ್ಲಿಸಿಕೊಡಬೇಕು. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಒಂದು ವರ್ಷದಲ್ಲಿ ಶೈಕ್ಷಣಿಕ ದುರಾಡಳಿತ ನಡೆಸಿದೆ. ಇದರಿಂದ ರಾಜ್ಯದಲ್ಲಿ ಶಿಕ್ಷಕರು ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಕರ್ನಾಟಕದಲ್ಲಿ ಶಿಕ್ಷಣದಲ್ಲಿ ಒನ್‌ವೇ ಆಡಳಿತ ನಡೆಯುತ್ತಿದೆ. ಹಾಲಿ ಶಿಕ್ಷಣ ಸಚಿವರು, ಮಸೇಜ್ ಮೂಲಕ, ವಾಟ್ಸಪ್ ಮೂಲಕ ಸಂದೇಶಗಳನ್ನು ನೀಡಿ ಆನ್ಲೈನ್ ಸಭೆಗಳ ಮೂಲಕ ಶಿಕ್ಷಣವನ್ನು ಮುನ್ನೆಡೆಸುವ ಕೆಲಸ ಮಾಡುತ್ತಿದ್ದಾರೆ. ಶಿಕ್ಷಕರನ್ನು ತುರ್ತು ಸೇವಾ ಸಿಬ್ಬಂದಿಗಳೆನ್ನುವ ರೀತಿ ನಡೆಸಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.

ಶಿಕ್ಷಣ ಇಲಾಖೆಯಲ್ಲಿ ಶಿಕ್ಷಕರಿಗೆ ಮಾತ್ರ ನೋವಿಲ್ಲ, ಶಿಕ್ಷಣಾಧಿಕಾರಿಗಳಿಗೂ ಸಂಕಷ್ಟ ಎದುರಾಗಿದೆ. ಒನ್‌ವೇ ಆಡಳಿತ ನಡೆಯುತ್ತಿದೆ. ಟ್ರಾಫಿಕ್ ಜಾಮ್ ಕೂಡ ಆಗುವ ಸನ್ನಿವೇಶ ನಿರ್ಮಾಣ ಆಗಿದೆ. ಸರ್ಕಾರವು ಶಿಕ್ಷಣಾಧಿಕಾರಿಗಳ ಮೇಲೆ ಅಸ್ತ್ರಗಳನ್ನು ಪ್ರಯೋಗಿಸುತ್ತಿದ್ದಾರೆ. ಶಿಕ್ಷಣಾಧಿಕಾರಿಗಳ ಮೇಲೆ ಗಧಾಪ್ರಹಾರ ಮಾಡುತ್ತಿದೆ. ಈ ಸರ್ಕಾರ ಬಂದ ಮೇಲೆ ಡಯಟ್‌ಗಳಲ್ಲಿ ಹುದ್ದೆಗಳನ್ನು ಕಡಿಮೆ ಮಾಡುವಕೆಲಸಮಾಡುತ್ತಿದೆ.ಶೈಕ್ಷಣಿಕವಾಗಿ ಕೆಲಸ ಮಾಡುತ್ತಿಲ್ಲ. ಶಿಕ್ಷಣಾಧಿಕಾರಿಗಳ ಮೇಲೆ ಭ್ರಷ್ಟಾಚಾರ ಮಾಡಿಸುವ ಮೂಲಕ ದೌರ್ಜನ್ಯ ಮಾಡುತ್ತಿದೆ. ಶಿಕ್ಷಕರ ನೈತಿಕ ಸ್ಥೈರ್ಯ ಕಡಿಮೆ ಮಾಡುತ್ತಿದೆ ಎಂದು ದೂರಿದರು.




ರಾಜ್ಯದಲ್ಲಿ 6 ವಿಧಾನ ಪರಿಷತ್ ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದೆ.. ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ನಾಲ್ಕನೇ ಬಾರಿಗೆ ನಾರಾಯಣಸ್ವಾಮಿ ರವರನ್ನ ಅಭ್ಯರ್ಥಿಯನ್ನಾಗಿ ಬಿಜೆಪಿ ಪಕ್ಷ ಮಾಡಿದೆ. ಶಿಕ್ಷಣದ ಹಿತದೃಷ್ಟಿಯಿಂದ ನಾರಾಯಣಸ್ವಾಮಿ ರವರನ್ನು ಗೆಲ್ಲಿಸಿಕೊಡಿ ಇಡೀ ರಾಜ್ಯದ ಶಿಕ್ಷಣ ವ್ಯವಸ್ಥೆ ಕುಸಿತಕಂಡಿದೆ.

5,8,9 ತರಗತಿಗಳ ಪರೀಕ್ಷೆಗಾಗಿ ಕೋರ್ಟ್‌ನಿಂದ ಸರ್ಕಾರ ಛೀ ಮಾರಿ ಹಾಕಿಸಿಕೊಂಡಿದೆ. ಶಿಕ್ಷಣದ ಪ್ರಭಾವ ಕಡಿಮೆಗೊಳಿಸಿ, ಅಧಿಕಾರಿಗಳನ್ನು ಬಿಟ್ಟು ಕೆಲಸ ಮಾಡಿಸುತ್ತಿದೆ. ಒಂದು ವರ್ಷದ ಅವಧಿಯಲ್ಲಿ ಶಾಲಾ ಕೊಠಡಿ ನಿರ್ಮಾಣ ಮಾಡಿಲ್ಲ. ಸರ್ಕಾರದ ದುರಾಡಳಿತವನ್ನು ತಡೆದು ಕಿವಿ ಹಿಂಡಲು, ಆರು ಕ್ಷೇತ್ರಗಳಲ್ಲಿ ಎನ್ ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಕಡ್ಡಾಯ ನಿವೃತ್ತಿ ಎಂಬ ಅಸ್ತ್ರವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲೆ ಈ ಕಾಂಗ್ರೆಸ್ ಸರ್ಕಾರ ಹೇರುತ್ತಿದೆ. ಶಿಕ್ಷಣ ಇಲಾಖೆ ದುರಾಡಳಿತ ಕಾಣುವ ಪರಿಸ್ಥಿತಿ ನಿರ್ಮಾಣವಾಗಿದೆ.. ಮೂರು ಹಂತದ ಪರೀಕ್ಷೆ ನಡೆಸುತ್ತೇವೆ ಎಂದು ಹೇಳುತ್ತಾರೆ ಈ ಬಗ್ಗೆ ಎಂದಾದರೂ ಶಿಕ್ಷಣಾಧಿಕಾರಿಗಳ ಸಭೆ ನಡೆಸಿ ತೀರ್ಮಾನ ಮಾಡಿದ್ದಾರಾ... ಕೆಎಎಸ್ ಅಧಿಕಾರಿಗಳನ್ನು ನೇಮಕ ಮಾಡುವುದರ ಮೂಲಕ ಅಡಳಿತಾಧಿಕಾರಿಗಳು ಶಿಕ್ಷಣಾಧಿಕಾರಿಗಳ ಮೇಲೆ ಗದಾಪ್ರಹಾರ ಮಾಡಲು ಬಿಟ್ಟಿದ್ದಾರೆ. ಬಿಜೆಪಿ ಸರ್ಕಾರ ವಿವೇಕ್ ಯೋಜನೆ ಜಾರಿ ಮಾಡುವುದರ ಮೂಲಕ ಶಿಕ್ಷಣ ಇಲಾಖೆಯನ್ನ ಅಭಿವೃದ್ಧಿ ಮಾಡುವ ಕೆಲಸ ಮಾಡುತ್ತಿತ್ತು ಆದರೆ ಕಾಂಗ್ರೆಸ್ ಸರ್ಕಾರದಲ್ಲಿ ಒಂದು ಇಟ್ಟಿಗೆ ಇಡುವ ಕೆಲಸವೂ ಸಹ ಆಗಿಲ್ಲ ಎಂದರು.

ಇದೇ ಸಂದರ್ಭದಲ್ಲಿ ನಗರದ ಕಲಾ ಕಾಲೇಜಿಗೆ ಬೇಟಿ ನೀಡಿದ ಬಿಜೆಪಿ ಮುಖಂಡರು, ವಿಧಾನ ಪರಿಷತಗೆ ಸ್ಪರ್ದೆ ಮಾಡಿರುವ ವೈ.ಎ.ನಾರಾಯಣಸ್ವಾಮಿಯವರ ಪರವಾಗಿ ಮತಯಾಚನೆ ಮಾಡಿದರು.

**ವಿಜಯೇಂದ್ರ ಭೇಟಿ :** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮೇ.25 ರಂದು ಚಿತ್ರದುರ್ಗ ಜಿಲ್ಲೆಗೆ ಭೇಟಿ ನೀಡುತ್ತಿದ್ದಾರೆ. ವಿಧಾನ ಪರಿಷತ್ ಚುನಾವಣೆ ಹಿನ್ನಲೆಯಲ್ಲಿ ಜಿಲ್ಲೆಗೆ ಆಗಮಿಸುತ್ತಿರುವ ಅವರು, ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಪರ ಮತಯಾಚನೆ ಮಾಡಲಿದ್ದಾರೆ.

ಮೇ.25 ಶನಿವಾರ ಮಧ್ಯಾಹ್ನ 12 ಗಂಟೆಗೆ ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯಲ್ಲಿರುವ ವಿನಾಯಕ ಕಲ್ಯಾಣ ಮಂಟಪದಲ್ಲಿ ಸಭೆ ಆಯೋಜಿಸಲಾಗಿದೆ. ಸಭೆಗೆ ಶಿಕ್ಷಕ ಮತದಾರರು ಆಗಮಿಸಲಿದ್ದು, ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಜಿಲ್ಲೆಯ ಹಲವಾರು ನಾಯಕರು ಭಾಗವಹಿಸಲಿದ್ದಾರೆ.

ಈ ಸಮಯದಲ್ಲಿ ಮಾಜಿ ಶಾಸಕ ತಿಪ್ಪಾರೆಡ್ಡಿ, ಜಿಲ್ಲಾಧ್ಯಕ್ಷ ಮುರುಳಿ, ಸಂಪತ್ ಕುಮಾರ್ ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ವಕ್ತಾರ ನಾಗರಾಜ್ ಬೇದ್ರೆ ವೃಷಬೇಂದ್ರಸ್ವಾಮಿ, ಜಯ್ಯಣ್ಣ, ನೀಲಕಂಠೇಚಾರ್, ಕಲ್ಲೇಶಯ್ಯ ಇದ್ದರು.

## ಫಾಸ್ಟ್ ನ್ಯೂಸ್

### ರಸಗೊಬ್ಬರ ವಿತರಣೆಗೆ ಒತ್ತಾಯ

» **ಚಳ್ಳಕೆರೆ**

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣನೇತೃತ್ವದಲ್ಲಿ ಮೇ.24ರ ಶುಕ್ರವಾರ ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿ ತಾಲ್ಲೂಕು ಆಡಳಿತಕ್ಕೆ ಮನವಿ ನೀಡಲಾಗುವುದು ಎಂದು ಅಧ್ಯಕ್ಷ ಕೆ.ಸಿ.ಶ್ರೀಕಂಠಮೂರ್ತಿ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ತಾಲ್ಲೂಕು ಪ್ರಧಾನಕಾರ್ಯದರ್ಶಿ ಆರ್.ಬಸವರಾಜು ಕಳೆದ 2023ರಲ್ಲಿ ಮಳೆ ಇಲ್ಲದೆ ಬೆಳೆಗಳು ಸಂಪೂರ್ಣ ಒಣಗಿ ರೈತರು ನಷ್ಟ ಅನುಭವಿಸಬೇಕಾಯಿತು. 2024ರ ಮುಂಗಾರು ಮಳೆ ಈಗಷ್ಟೇ ಆರಂಭವಾಗಿ ತಾಲ್ಲೂಕಿನಾದ್ಯಂತ ಉತ್ತಮ ಹದ ಮಳೆಯಾಗಿದೆ. ರೈತರು ಈಗಾಗಲೇ ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದು, ರೈತರಿಗೆ ಬೀಜ, ಗೊಬ್ಬರ, ಕ್ರಿಮಿನಾಶಕ ಹಾಗೂ ಇನ್ನಿತರೆ ಸಲಕರಣೆಗಳನ್ನು ಸಬ್ಸಿಡಿ ದರದಲ್ಲಿ ಒದಗಿಸುವಂತೆ ತಾಲ್ಲೂಕು ಆಡಳಿತಕ್ಕೆ ಮನವಿ ಮಾಡಲು ಈ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು. ಪ್ರತಿಭಟನೆಯ ನೇತೃತ್ವವನ್ನು ರೆಡ್ಡಿಹಳ್ಳಿವೀರಣ್ಣ ವಹಿಸಲಿದ್ದು, ರೈತ ಸಂಘದ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಭಾಗವಹಿಸುವರು. ಈಗಾಗಲೇ ತಾಲ್ಲೂಕಿನಾದ್ಯಂತ ರೈತರಿಗೆ ಮೇ.24ರ ರೈತರ ಪ್ರತಿಭಟನೆಗೆ ಆಗಮಿಸುವಂತೆ ಮನವಿ ಮಾಡಿಕೊಂಡಿದ್ದು, ನೂರಾರು ರೈತರು ಹೋರಾಟದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

### ಜಿಲ್ಲಾ ಆಸ್ಪತ್ರೆಯಲ್ಲಿ ಡೆಂಗ್ಯೂಜ್ವರದ ಚಿಕಿತ್ಸೆ ಪ್ಲೇಟ್‌ಲೆಟ್ಸ್ ಲಭ್ಯ




» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಡೆಂಗ್ಯೂಜ್ವರದ ಚಿಕಿತೆಗಾಗಿ ಬೇಕಾಗುವ ಪ್ಲೇಟ್‌ಲೆಟ್ (Platelets) ಲಭ್ಯವಿದ್ದು, ಜಿಲ್ಲಾ ಆಸ್ಪತ್ರೆ ಡೆಂಗ್ಯೂ ಪ್ರಕರಣಗಳ ಚಿಕಿತ್ಸೆಗೆ ಸಿದ್ಧವಾಗಿದೆ. ಸಾರ್ವಜನಿಕರು ಮತ್ತು ರೋಗಿಗಳು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಜೈವಿಕ ಗೊಬ್ಬರಗಳ ಮಾರಾಟ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯ ಜೈವಿಕ ಕೇಂದ್ರದಲ್ಲಿ, ಉತ್ತಮ ಗುಣಮಟ್ಟದ ಜೈವಿಕ ನಿಯಂತ್ರಕಗಳಾದ ಟ್ರೈಕೋಡರ್ಮ, ಸೂಡೊಮೋನಾಸ್ ಹಾಗೂ ಜೈವಿಕಗೊಬ್ಬರಗಳಾದದ್ರವರೂಪದಜೈವಿಕಗೊಬ್ಬರ ಘನರೂಪದ ಜೈವಿಕ ಗೊಬ್ಬರ ಅಜಟೋಬ್ಯಾಕ್ಟರ್ ಜೈವಿಕ ಗೊಬ್ಬರ ಗಳನ್ನು ತಯಾರು ಮಾಡಿ ಇಲಾಖಾ ದರದಲ್ಲಿ ಮಾರಾಟ ಮಾಡಲಾಗುತ್ತದೆ. ಇವುಗಳು ಮಣ್ಣಿನ ಜೈವಿಕ ಮತ್ತು ಭೌತಿಕ ಗುಣಗಳನ್ನು ಕಾಪಾಡಿ ಭೂಮಿಯ ಫಲವತ್ತತೆ ಹೆಚ್ಚಿಸುವಲ್ಲಿ, ಪ್ರಮುಖ ಪಾತ್ರ ನಿರ್ವಹಿಸುತ್ತದೆ. ಆಸಕ್ತ ರೈತರು ಉತ್ತಮ ಗುಣಮಟ್ಟದ ಜೈವಿಕ ನಿಯಂತ್ರಕ ಹಾಗೂ ಜೈವಿಕ ಗೊಬ್ಬರಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9611556835 ಸಂಪರ್ಕಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

# ಹೆಚ್.ಆಂಜನೇಯರವರನ್ನು ಎಂಎಲ್ಸಿ ಮಾಡಿ

» **ಚಿತ್ರದುರ್ಗ**

ಪಕ್ಷದ ಅಭಿವೃದ್ಧಿ ಏಳಿಗೆಗಾಗಿ ಶ್ರಮಿಸುತ್ತಿರುವ ಸಮಾಜ ಕಲ್ಯಾಣ ಇಲಾಖೆ ಮಾಜಿ ಸಚಿವ ಹೆಚ್.ಆಂಜನೇಯರವರನ್ನು ವಿಧಾನಪರಿಷತ್‌ಗೆ ನಾಮ ನಿರ್ದೇಶನಗೊಳಿಸುವಂತೆ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಆರ್.ಕೃಷ್ಣಮೂರ್ತಿ ಕಾಂಗ್ರೆಸ್ ನಾಯಕರುಗಳನ್ನು ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದಲ್ಲಿ ಅಪಾರ ಅಭಿಮಾನಿಗಳನ್ನು ಹೊಂದಿರುವ ಹೆಚ್.ಆಂಜನೇಯರವರು ಹಿಂದುಳಿದವರು, ದಲಿತರು, ಅಲ್ಪಸಂಖ್ಯಾತರ ಪರವಾಗಿ ಹೋರಾಟ ಮಾಡಿಕೊಂಡು ಬರುತ್ತಿದ್ದಾರೆ. ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಯುವ ನಾಯಕ ರಾಹುಲ್‌ಗಾಂಧಿ, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸುರ್ಜೆವಾಲ ಇವರುಗಳು ಹೆಚ್. ಆಂಜನೇಯರವರು ಪಕ್ಷಕ್ಕೆ ಸಲ್ಲಿಸುತ್ತಿರುವ ಸೇವೆಯನ್ನು ಪರಿಗಣಿಸಿ ವಿಧಾನಪರಿಷತ್‌ಗೆ ನೇಮಕ ಮಾಡಿಕೊಳ್ಳುವಂತೆ ಮನವಿ ಮಾಡಿದರು.ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ನರಸಿಂಹರಾಜ ಮಾತನಾಡಿ ಹೆಚ್. ಆಂಜನೇಯರವರು ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಶೋಷಿತರ ಪರವಾಗಿ ಹಿಂದಿನಿಂದಲೂ ಹೋರಾಟ ಮಾಡಿಕೊಂಡು ಬರುತ್ತಿರುವುದರ ಜೊತೆಗೆ ರಾಜ್ಯವನ್ನು ಸುತ್ತಿದ್ದಾರೆ. ಅಂತಹ ನಾಯಕನನ್ನು ವಿಧಾನ ಪರಿಷತ್‌ಗೆ ನಾಮ ನಿರ್ದೇಶನ ಮಾಡಿಕೊಳ್ಳಬೇಕೆಂದು ಆಗ್ರಹಿಸಿದರು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರುಗಳಾದ ಬಿ.ಪಿ.ಪ್ರಕಾಶ್‌ಮೂರ್ತಿ, ಶಿವಮೂರ್ತಿ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.



# ದ್ವಿತೀಯ ಪಿಯು ಪರೀಕ್ಷೆ-2 ಫಲಿತಾಂಶ; ಜಿಲ್ಲೆಯಲ್ಲಿ ಶೇ.27.07 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ

» **ಚಿತ್ರದುರ್ಗ**

ಜಿಲ್ಲೆಯಲ್ಲಿ 2024ರ ಏಪ್ರಿಲ್ 29 ರಿಂದ ಮೇ 16 ರವರೆಗೆ ನಡೆದ ದ್ವಿತೀಯ ಪಿಯುಸಿ ಪರೀಕ್ಷೆ–2ರ ಫಲಿತಾಂಶ ಪ್ರಕಟವಾಗಿದ್ದು, ಜಿಲ್ಲೆಗೆ ಪರೀಕ್ಷೆ–2ರಲ್ಲಿ ಶೇ.27.07 ಫಲಿತಾಂಶ ಲಭಿಸಿದೆ. ಕಲಾವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ 1852 ವಿದ್ಯಾರ್ಥಿಗಳ ಪೈಕಿ 385 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ 1012 ವಿದ್ಯಾರ್ಥಿಗಳ ಪೈಕಿ 191 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ 1735 ವಿದ್ಯಾರ್ಥಿಗಳ ಪೈಕಿ 669 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟಾರೆಯಾಗಿ ಜಿಲ್ಲೆಯಲ್ಲಿ ಪರೀಕ್ಷೆಗೆ ಹಾಜರಾದ 4599 ವಿದ್ಯಾರ್ಥಿಗಳ ಪೈಕಿ 1245 ವಿದ್ಯಾರ್ಥಿಗಳು ಹಾಜರಾಗಿದ್ದಾರೆ. ಪರೀಕ್ಷೆಗೆ ಹಾಜರಾದ 3590 ರೆಗ್ಯುಲರ್ ವಿದ್ಯಾರ್ಥಿಗಳ ಪೈಕಿ 1095 ತೇರ್ಗಡೆಯಾಗಿದ್ದಾರೆ. 829 ಪುನಾರಾವರ್ತಿತ ವಿದ್ಯಾರ್ಥಿಗಳ ಪೈಕಿ 118 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಹಾಗೂ 180 ಖಾಸಗಿ ವಿದ್ಯಾರ್ಥಿಗಳ ಪೈಕಿ 32 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ನಗರ ಪ್ರದೇಶದಲ್ಲಿ ಪರೀಕ್ಷೆಗೆ ಹಾಜರಾದ 3293 ವಿದ್ಯಾರ್ಥಿಗಳ ಪೈಕಿ 946 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

**ಪ್ರಮುಖ ಸುದ್ದಿ**

# ಮೇವು, ಬಿತ್ತನೆಬೀಜ, ರಸಗೊಬ್ಬರ, ಕುಡಿಯುವ ನೀರಿಗೆ ಕೊರತೆಯಾಗದಂತೆ ಗಮನಹರಿಸಿ: ಸಿಎಂ

» **ಚಿತ್ರದುರ್ಗ**

ರಾಜ್ಯದ ಎಲ್ಲಾ ಜಿಲ್ಲೆಗಳ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜನಸಾಮಾನ್ಯರ ನಿತ್ಯ ಜೀವನ ನಿರ್ವಹಣೆಗೆ ಅನುಕೂಲವಾಗುವಂತೆ ಶುದ್ಧ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಮುಂಗಾರು ಹಾಗೂ ಪೂರ್ವ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳಿಗೆ ರಸಗೊಬ್ಬರ ಮತ್ತು ಔಷಧಿ ಸೇರಿ ಯಾವುದೇ ಕೊರತೆಯಾಗದಂತೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಅಗತ್ಯ ತುರ್ತು ಕ್ರಮಗಳನ್ನು ಕೈಗೊಳ್ಳುವಂತೆ ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸೂಚಿಸಿದರು.

ಅವರು ಇಂದು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಏರ್ಪಡಿಸಲಾಗಿದ್ದ ವಿಡಿಯೋ ಸಂವಾದದಲ್ಲಿ ರಾಜ್ಯದಲ್ಲಿನ ಪ್ರಸಕ್ತ ಸಮಸ್ಯೆಗಳು, ನೀರು, ಬರ ಮತ್ತು ತುರ್ತು ವಿಪತ್ತು ನಿರ್ವಹಣಾ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.




ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಖಾತೆಯಲ್ಲಿರುವ ಅನುದಾನವನ್ನು ತುರ್ತು ಕೆಲಸ–ಕಾರ್ಯಗಳು, ನೀರು ಮತ್ತು ಬರ ನಿರ್ವಹಣೆ, ಜಾನುವಾರುಗಳಿಗೆ ಮೇವಿನ ಸರಬರಾಜು ಮುಂತಾದ ಕಾರ್ಯಗಳಿಗೆ ಬಳಸಿಕೊಳ್ಳಲುಈಗಾಗಲೇಸೂಚಿಸಲಾಗಿದೆ. ಈ ತುರ್ತು ಕಾರ್ಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವರ್ತನೆಯನ್ನು ಸಹಿಸಿಕೊಳ್ಳಲಾಗುವುದಿಲ್ಲ ಎಂದವರು ಎಚ್ಚರಿಸಿದರು.

ಜಾನುವಾರುಗಳಿಗೆ ಮೇವಿನ ಕೊರತೆ ಇರುವ ಜಿಲ್ಲೆಗಳಲ್ಲಿ ಮೇವಿನ ದಾಸ್ತಾನು ಮಾಡಿಕೊಳ್ಳುವಂತೆ ಹಾಗೂ ಈ ಹಿಂದಿನ ಸಾಲಿನಲ್ಲಿ ಬೆಳೆಹಾನಿಗೊಳಗಾದ ರೈತರಿಗೆ ಸರ್ಕಾರದಿಂದ ಬಿಡುಗಡೆಗೊಳಿಸಲಾಗಿದ್ದ ಸಹಾಯಧನವನ್ನು ಕೂಡಲೇ ಬಿಡುಗಡೆಗೊಳಿಸುವಂತೆಜಿಲ್ಲಾಧಿಕಾರಿಗಳಿಗೆ ಸೂಚಿಸಿದರು. ಈ ಎಲ್ಲಾ ತುರ್ತು ಹಾಗೂ ಸಕಾಲಿಕ ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಸ್ಥಳೀಯ ಸಚಿವರು, ಶಾಸಕರು ಹಾಗೂ ಚುನಾಯಿತ ಪ್ರತಿನಿಧಿಗಳ ಸಲಹೆ–ಸಹಕಾರವನ್ನು ಪಡೆದುಕೊಳ್ಳುವಂತೆ ಸೂಚಿಸಿದ ಅವರು, ಮಳೆಯ ಅನಾಹುತಗಳು ಸಂಭವಿಸುವ ಮುನ್ನ ಅದರ ನಿಯಂತ್ರಣ ಹಾಗೂ ಪರಿಹಾರ ಕ್ರಮಗಳನ್ನು ಅನುಸರಿಸುವಂತೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಕೆಲವು ಜಿಲ್ಲೆಗಳಲ್ಲಿ ಮೃತ ರೈತ ಕುಟುಂಬಗಳಿಗೆ ಪರಿಹಾರ ಕೊಡಿಸುವಲ್ಲಿ ಗಣನೀಯ ವಿಳಂಬವಾಗಿರುವುದು ಗಮನಕ್ಕೆ ಬಂದಿದೆ. ಆಗಿರುವ ಅನಗತ್ಯ ವಿಳಂಬಕ್ಕೆ ಕಾರಣ ಏನು ಎಂಬುದನ್ನು ಗಮನಿಸಿ, ಅತ್ಯಂತ ತ್ವರಿತಗತಿಯಲ್ಲಿ ಪರಿಹಾರಧನಒದಗಿಸಲುಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕು ಜಿಲ್ಲಾಧಿಕಾರಿಗಳು ಈ ಸಂಬಂಧ ತಕ್ಷಣ ಸಭೆ ಕರೆದು ಸಂಬಂಧಿಸಿದ ಅಧಿಕಾರಿ–ಸಿಬ್ಬಂಧಿಗಳಿಗೆ ಮಾಹಿತಿ ನೀಡಿ ಪರಿಹಾರ ವಿತರಿಸಲು ಕ್ರಮ ಕೈಗೊಳ್ಳಬೇಕೆಂದವರು ನುಡಿದರು.

ರಾಜ್ಯದಲ್ಲಿಯೇ ಹಾವೇರಿ ಜಿಲ್ಲೆಯಲ್ಲಿ ಅತ್ಯಂತ ಹೆಚ್ಚಿನ ರೈತರ ಸಾವಿನ ಪ್ರಕರಣಗಳು ದಾಖಲಾಗಿರುವುದು ಅತ್ಯಂತ ನೋವಿನ ಸಂಗತಿ. ಇದರ ನಿಯಂತ್ರಿಸುವಲ್ಲಿ ಹಾಗೂ ರೈತರ ಮನೋಸ್ಥೈರ್ಯ ಹೆಚ್ಚಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ವಿಶೇಷ ಗಮನಹರಿಸಬೇಕು ಎಂದ ಅವರು ಸಾವಿನ ನಿಖರ ಮಾಹಿತಿ ಪಡೆಯಲು ಸಮಿತಿಯೊಂದನ್ನು ರಚಿಸಲಾಗುವುದು ಎಂದವರು ನುಡಿದರು.


ಪುಟ 2

## ಫಾಸ್ಟ್ ನ್ಯೂಸ್

### ಮೇವು, ಬಿತ್ತನೆಬೀಜ, ರಸಗೊಬ್ಬರ, ಕುಡಿಯುವ ನೀರಿಗೆ ಕೊರತೆ ಆಗದಂತೆ ಗಮನಹರಿಸಿ

» ಮೊದಲ ಪುಟದಿಂದ

ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿದ್ದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಮಾನ್ಯ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿ, ಜಿಲ್ಲೆಯಲ್ಲಿ ವಾಡಿಕೆಪ್ರಮಾಣದಮಳೆಬಂದಿದೆ.ಆದಾಗ್ಯೂಪ್ರಸ್ತುತ ಸಂದರ್ಭದಲ್ಲಿ ಜಿಲ್ಲೆಯ ಸುಮಾರು 75ಗ್ರಾಮಗಳಿಗೆ ಟ್ಯಾಂಕರ್‌ಗಳ ಮೂಲಕ ಶುದ್ಧ ಕುಡಿಯುವ ನೀರನ್ನು ಪೂರೈಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮಳೆ ಬಂದಲ್ಲಿ ಹಂತಹಂತವಾಗಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವುದನ್ನು ಸ್ಥಗಿತಗೊಳಿಸಲಾಗುವುದು ಎಂದರು. ಜಿಲ್ಲೆಯ 10 ಗೋಶಾಲೆಗಳಿಗೆ ಅಗತ್ಯ ನೀರು, ಮೇವು ಮತ್ತು ಜಾನುವಾರುಗಳ ಸಾಕಾಣಿಕೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಪ್ರಸಕ್ತ ಪೂರ್ವ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ಹೊಸದುರ್ಗ ತಾಲೂಕಿನ ಸುಮಾರು 25,000ಹೆಕ್ಟೇರ್ ಪ್ರದೇಶದಲ್ಲಿ ಕೃಟಿ ಚಟುವಟಿಕೆಗಳು ಚುರುಕಾಗಿವೆ. ಕೃಷಿ ಚಟುವಟಿಕೆಗಳಿಗೆ ಅಗತ್ಯವಾಗಿರುವ ರಸಗೊಬ್ಬರ ಹಾಗೂ ಔಷಧಗಳು ದಾಸ್ತಾನಿಕರಿಸಲಾಗಿದೆ ಅಲ್ಲದೇ ಯಾವುದೇ ಕೊರತೆ ಇರುವುದಿಲ್ಲ. ಸಕಾಲದಲ್ಲಿ ಮಳೆ ಬರುತ್ತಿರುವುದರಿಂದ ಜಲಮೂಲಗಳಿಗೆ ಗಣನೀಯ ಪ್ರಮಾಣದ ನೀರಿನ ಹರಿವು ಹೆಚ್ಚಳವಾಗಿದೆ ಎಂದರು. ಬೆಂಗಳೂರಿನಿಂದ ನಡೆದ ವಿಡಿಯೋ ಸಂವಾದದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೃಷ್ಣಬೈರೇಗೌಡ, ಎಚ್.ಕೆ.ಪಾಟೀಲ್, ಹೆಚ್.ಕೆ.ಮುನಿಯಪ್ಪ, ಪ್ರಿಯಾಂಕಖರ್ಗೆ, ಸುರೇಶ್ ಸೇರಿದಂತೆ ಸರ್ಕಾರ ಮುಖ್ಯ ಕಾರ್ಯದರ್ಶಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಸಚಿವ ಸಂಪುಟದ ಸಚಿವರು ಹಾಗೂ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

### ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ತೋಟಗಾರಿಕೆ ಇಲಾಖೆ ವ್ಯಾಪ್ತಿಯ ಹಿರೆಗುಂಟನೂರು ಹೊಬಳಿಯ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ 10 ತಿಂಗಳ ವಸತಿ ಸಹಿತ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಮೇ.23 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಜೂನ್ 03 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರು ಹೋಬಳಿ ವ್ಯಾಪ್ತಿಯ ಐಯ್ಯನಹಳ್ಳಿ ಗ್ರಾಮದಲ್ಲಿನ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2024-25ನೇ ಸಾಲಿನಲ್ಲಿ 2024ರ ಜೂನ್ 15 ರಿಂದ 2025ರ ಮಾ.31 ರವರೆಗೆ ಅವಧಿ ಪರಿಷ್ಕರಿಸಲಾಗಿದ್ದು, ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.ತರಬೇತಿ ಅರ್ಜಿಗಳನ್ನು ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಚಿತ್ರದುರ್ಗ ಕಚೇರಿಯಲ್ಲಿ ಅಥವಾ ಇಲಾಖೆಯ ವೆಬ್‌ಸೈಟ್ https://horticulturedir.karnataka.gov.in ನಲ್ಲಿ ಅಥವಾ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದೆ.ಆಯ್ಕೆಯಾದ ಶಿಬಿರಾರ್ಥಿಗಳಿಗೆ ಜಿಲ್ಲೆಯ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ವಸತಿ ಸಹಿತ ತರಬೇತಿ ನೀಡಲಾಗುವುದು. ಮಾಜಿ ಸೈನಿಕ ಅಭ್ಯರ್ಥಿಗಳು ಆಯ್ಕೆಗೊಂಡಲ್ಲಿ ಈ ಅಭ್ಯರ್ಥಿಗಳಿಗೆ ಉಚಿತವಾಗಿ ಕಲಿಕೆಯ ಎಲ್ಲಾ ತರಹದ ಅವಕಾಶಗಳನ್ನು ಕಲ್ಪಿಸಲಾಗುವುದು. ಆದರೆ ವಸತಿ ನಿಲಯದಲ್ಲಿ ವಾಸ್ತವ್ಯದ ವ್ಯವಸ್ಥೆ ಕಡ್ಡಾಯ ಇರುವುದಿಲ್ಲ ಹಾಗೂ ಶಿಷ್ಯವೇತನಕ್ಕೆ ಅವಕಾಶವಿರುವುದಿಲ್ಲ. ತರಬೇತಿಗೆ ಒಟ್ಟು 15 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆ ಸರ್ಕಾರದ ಮೀಸಲಾತಿ ನಿಯಮಗಳನುಸಾರ ಆಯ್ಕೆ ಮಾಡಲಾಗುತ್ತದೆ.

ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣವಾಗಿರಬೇಕು. ತರಬೇತಿ ಬಯಸುವ ಅಭ್ಯರ್ಥಿಯ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಜಮೀನನ್ನು ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರ ತರಬೇತಿಯನ್ನು ಪಡೆಯಲು ಇಚ್ಛಿಸಿದ್ದಲ್ಲಿ ಡಿಸ್‌ಜಾರ್ಜ್ ಬುಕ್, ಪರ್ಸನಲ್ ಪೆನ್ಶನ್ ಆರ್ಡರ್ ಕಾಪಿ, ಎಕ್ಸ್ ಸರ್ವಿಸ್ ಮ್ಯಾನ್ ಐಡಿ ಕಾರ್ಡ್ ಕಾಪಿ, ಇತ್ಯಾದಿಗಳನ್ನ ಸಲ್ಲಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ 18 ವರ್ಷ ದಿಂದ 33 ವರ್ಷ, ಮಾಜಿ ಸೈನಿಕರಿಗೆ 33 ವರ್ಷ ದಿಂದ 65 ವರ್ಷ ವಯಸ್ಸಿನವರಾಗಿರಬೇಕು.ಸಾಮ್ಯಾನ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.30, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.15 ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ (ಆಆ) ಮೂಲಕ Deputy Director of Horticulture (ZP) Chitradurga ಹೆಸರಿನಲ್ಲಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಚಿತ್ರದುರ್ಗ ಕಚೇರಿಗೆ ಜೂನ್.3 ಸಂಜೆ 5.30 ರೊಳಗೆ ಅರ್ಜಿ ಸಲ್ಲಿಸಬೇಕು. ಜೂನ್ 06 ರಂದು ಬೆಳಿಗ್ಗೆ 10.ಗಂಟೆಗೆ ಚಿತ್ರದುರ್ಗ ತೋಟಗಾರಿಗೆ ಉಪ ನಿರ್ದೇಶಕರರ ಕಚೇರಿಯಲ್ಲಿ ಸಂದರ್ಶವನ್ನು ನೆಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-230895, 9980991048 ಅನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಕಾಂಗ್ರೆಸ್‌ನಿಂದ ದೇಶದ ಸಮಗ್ರ ಅಭಿವೃದ್ಧಿ

» ಚಿತ್ರದುರ್ಗ

ದೇಶವನ್ನು ಸಮಗ್ರವಾಗಿ ಅಭಿವೃದ್ದಿಯ ಪಥದತ್ತ ಕೊಂಡೊಯ್ದ ಕೀರ್ತಿ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರಿಗೆ ಸಲ್ಲುತ್ತದೆ ಎಂದು ಕೆಪಿಸಿಸಿ ಐಎನ್‌ಬಿಸಿಡಬ್ಲ್ಯೂಎಫ್ ಉಪಾಧ್ಯಕ್ಷ ಎ.ಜಾಕೀರ್ ಹುಸೇನ್ ಹೇಳಿದರು

ಇಲ್ಲಿನ ದವಳಗಿರಿ ಬಡಾವಣೆಯಲ್ಲಿರುವ ಕೆಪಿಸಿಸಿ ಐಎನ್‌ಬಿಸಿಡಬ್ಲ್ಯೂಎಫ್ ಸ್ಥಳೀಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂದಿ ಅವರ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಜೀವ್ ಗಾಂಧಿ ಅವರು ಅತೀ ಚಿಕ್ಕವಯಸ್ಸಿನಲ್ಲಿಯೇ ದೇಶದ ಪ್ರಧಾನ ಮಂತ್ರಿಗಳಾಗಿ, ತಮ್ಮ ದೂರದೃಷ್ಟಿಯಿಂದ ಅನೇಕ ಮಹತ್ವಕಾಂಕ್ಷಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಅವರ ಸಾಧನೆಯನ್ನು ಯಾರೂ ಮರೆಯಲಾಗದು. ಅವರು ಈ ದೇಶದ ಸಮಗ್ರ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದು ಬಣ್ಣಿಸಿದರು



ರಾಜೀವ್‌ಗಾಂಧಿ ಅವರಿಗೆ ಈ ದೇಶವನ್ನು ಜಗತ್ತಿನ ಅತ್ಯಂತ ಎತ್ತರದ ಸ್ಥಾನದಲ್ಲಿನಿಲ್ಲಿಸಿ ನೋಡುವ ಮನಸ್ಸು ಇತ್ತು. ಈ ಕಾರಣಕ್ಕಾಗಿಯೇ ಅನೇಕ ಜನಪರ ಯೋಜನೆಗಳನ್ನು ಜಾರಿಗೊಳಿಸಿದರು. ಪಂಚಾಯತ್‌ರಾಜ್ ವ್ಯವಸ್ಥೆಯನ್ನೂ ಸಹ ಜಾರಿಗೆ ತಂದು ಅಧಿಕಾರ ವಿಕೇಂದ್ರೀಕರಣಕ್ಕೆ ಕಾರಣರಾದರು. ದೇಶಕ್ಕೆ ರಾಜೀವ್ ಗಾಂಧಿ ಅವರ ಕೊಡುಗೆ ಮಹತ್ವದ್ದು. ಇವರು ಇದ್ದಿದ್ದರೆ ಈ ದೇಶ ಇನ್ನೂ ಎತ್ತರಕ್ಕೆ ಬೆಳೆಯುತ್ತಿತ್ತು ಎಂದು ಹೇಳಿದರು.ಭಾರತ ಎಲ್ಲಾ ಜಾತಿ, ಧರ್ಮಗಳಿಂದ ಕೂಡಿದೆ. ಜಾತಿ, ಧರ್ಮಗಳ ನಡುವೆ, ಮನುಷ್ಯ ಮನುಷ್ಯರ ನಡುವೆ ಸುಮ್ಮನೆ ವಿಷ ಬಿತ್ತುವ ಕೆಲಸವನ್ನು ಕೆಲವು ಸಂಘಟನೆಗಳು ಮಾಡುತ್ತಿವೆ. ಅಂತಹ ಶಕ್ತಿಗಳಿಗೆ ಕಡಿವಾಣ ಹಾಕಿ ದೇಶದ ಐಕ್ಯತೆಯನ್ನು ಕಾಪಾಡಿಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದರು.

ಅಖಿಲ ಕರ್ನಾಟಕ ಟಿಪ್ಪು ಅಭಿಮಾನಿಗಳ ಸಂಘದ ಅಧ್ಯಕ್ಷ ಟಿಪ್ಪು ಖಾಸಿಂ ಅಲಿ ಮಾತನಾಡಿ, ದೇಶದಲ್ಲಿ ಇತ್ತೀಚಿನ ದಿನಮಾನಗಳಲ್ಲಿ ನಡೆಯುತ್ತಿರುವ ವಿದ್ಯಮಾನಗಳು ಎಲ್ಲರಲ್ಲೂ ಆತಂಕ ಮೂಡಿಸುತ್ತಿದೆ. ಸಂವಿಧಾನ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇಂದು ಆಡಳಿತ ನಡೆಯುತ್ತಿಲ್ಲ. ಬದಲಾಗಿ ಯಾವುದೋ ಶಕ್ತಿ ಅಧಿಕಾರಸ್ಥರ ಮೇಲೆ ಪ್ರಭಾವ ಬೀರುತ್ತಿದೆ. ಇದರಿಂದ ಅಶಾಂತಿಯ ವಾತಾವರಣ ನಿರ್ಮಾಣವಾಗುತ್ತಿದೆ ಎಂದರು

ಸಮಾಜದಲ್ಲಿ ಶೋಷಣೆಗೆ ಒಳಗಾದ ಸಮುದಾಯವನ್ನು ಮೇಲೆತ್ತಲು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಾಕಷ್ಟು ಹೋರಾಟ ನಡೆಸಿದ್ದಾರೆ. ಸಮ ಸಮಾಜ ನಿರ್ಮಾಣ ಮಾಡುವ ಆಶಯವಿರಿಸಿ ಕೊಂಡಿದ್ದ ಅಂಬೇಡ್ಕರ್ ಅವರು ಜಾತಿ ವ್ಯವಸ್ಥೆ, ಶೋಷಣೆ, ದಬ್ಬಾಳಿಕೆಯ ವಿರುದ್ಧ ದೊಡ್ಡಕ್ರಾಂತಿಯನ್ನೇ ಉಂಟು ಮಾಡಿದ್ದರು. ಅವರು ಕೊಟ್ಟಿರುವ ಪವಿತ್ರವಾದ ಸಂವಿಧಾನದ ಅಡಿಯಲ್ಲಿ ಅಧಿಕಾರ ಬಂದಿರುವ ನಾಯಕರು ದೇಶವನ್ನು ಹಾಳು ಮಾಡಲು ಹೊರಟಿದ್ದಾರೆ ಎಂದು ಕಿಡಿಕಾರಿದರು. ಜಿಲ್ಲಾ ಬಡಗಿ ನೌಕರರ ಸಂಘದ ಖಜಾಂಚಿ ಬಸವರಾಜಪ್ಪ, ಪದಾಧಿಕಾರಿ ಗಳಾದ ಸುರೇಶ್, ಜಗದೀಶಾಚಾರ್, ಗೋವಿಂದಪ್ಪ, ಜಗದೀಶ್ ಹಾಜರಿದ್ದರು.

# ಸಹಾನುಭೂತಿ ದಯೆ ಮೇಲೆ ಜಗತ್ತು ನಿಂತಿದೆ

» ದಾವಣಗೆರೆ

ಸಹಾನುಭೂತಿ ದಯೆ ಮತ್ತು ಪ್ರೀತಿಯ ಮೇಲೆಯೇ ಜಗತ್ತು ನಿಂತಿದೆ ಎನ್ನುವ ಗೌತಮ ಬುದ್ದರ ಸಂದೇಶ ಸರ್ವಕಾಲಿಕ ಹಾಗೂ ಸದಾ ಅನುಕರಣೀಯ ಎಂದು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್ ಕುಮಾರ್ ಹೇಳಿದರು.

ನಗರದ ಕೆ.ಬಿ.ಬಡಾವಣೆಯಲ್ಲಿರುವ ಸ್ಫೂರ್ತಿ ಸಾಂಸ್ಕೃತಿಕ ಸೇವಾ ಸಂಘದ ಕಾರ್ಯಾಲಯದಲ್ಲಿ ನಡೆದ ಬುದ್ಧ ಪೂರ್ಣಿಮಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಹಿಂಸೆ, ಜೀವನದ ಗೌರವ ಮತ್ತು ಮಹಿಳೆಯರಿಗೆ ಸಮಾತೆಯ ಭೋಧನೆಗಳಿಂದಾಗಿ ಬೌದ್ಧ ಧರ್ಮವು ಜನಪ್ರಿಯತೆಯನ್ನು ಗಳಿಸಿತು. ಭಾರತವನ್ನು ಜಗತ್ತಿನ ಇತರೆ ದೇಶಗಳು ಇಂದಿಗೂ ಬುದ್ದನ ನಾಡು ಎಂದೇ ಗುರುತ್ತಿಸುತ್ತದೆ. ಬುದ್ದ ಕೇವಲ ನೆನಪಲ್ಲ ಅದು ಸಮಾಜದ ಶಕ್ತಿಯ ಸೂಚಕ ಎಂದರು.ಕ್ರೌರ್ಯ, ಮೌಢ್ಯ, ಅಸಮಾನತೆ, ಕಂದಾಚಾರಗಳಂತಹ ಸ್ಥಾಪಿತ ಆಚರಣೆಗಳಿಂದ ನರಳುತ್ತಿದ್ದ ಜಗತ್ತಿಗೆ ಜ್ಞಾನದ ಬೆಳಕಾಗಿ ಶಾಂತಿ, ಸಮಾನತೆಯ ಹಾದಿ ತೋರಿದ ಗೌತಮ ಬುದ್ದರು ಸಮಾಜದ ದೇವರು ಧರ್ಮ ಬಗ್ಗೆ ಮಾತನಾಡುತ್ತಿದ್ದಾಗ ಗೌತಮ ಬುದ್ದರು ಮನುಷ್ಯನ ಬಗ್ಗೆ ಮಾತನಾಡಿ ಮಾನವ ಬದುಕಿಗೆ ಘನತೆ ತಂದು ಕೊಟ್ಟವರು ಎಂದರು.



ನಿವೃತ್ತ ಉಪನ್ಯಾಸಕರಾದ ಎಸ್.ಎಂ.ಮಲ್ಲಮ್ಮ ಮಾತನಾಡಿ, ಬುದ್ದ ಬಸವರ ಚಿಂತನೆಗಳು ಹಿಂದಿನ ಸಮಾಜಕ್ಕೆ ಪ್ರಸ್ತುತವಾಗಿವೆ. ಅಹಿಂಸೆ ಮತ್ತು ಕರುಣೆಯ ಸಮಾಜವನ್ನು ಗೌತಮ ಬುದ್ದರು ಬಯಸಿದ್ದರು ಎಂದರು.

ಕವಿಯತ್ರಿ ಸತ್ಯಭಾಮ ಮಂಜುನಾಥ ಮಾತನಾಡಿ, ಬುದ್ದ ಮಾನವೀಯ ಮೌಲ್ಯಗಳನ್ನು ಪಸರಿಸಿದ ಮನುಕುಲದ ಮಹಾಬೆಳಕು ಎಂದು ವರ್ಣಿಸಿದರು.ಈ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಬಿ.ಪರಮೇಶ್ವರಪ್ಪ , ಶರಣ ಸಾಹಿತ್ಯ ಪರಿಷತ್ ಗೌರವಾಧ್ಯಕ್ಷ ಪರಮೇಶ್ವರಪ್ಪ ಸಿರಿಗೆರೆ, ಕುಮಾರ ಅನೆಕೊಂಡ, ಸಾಹಿತಿ ಎಸ್.ಸಿದ್ದೇಶ್ ಕುರ್ಕಿ, ವಕೀಲರಾದ ಆರ್ ಯೋಗೀಶ್ವರಪ್ಪ. ಸ್ಫೂರ್ತಿ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷ ಎನ್.ಎಸ್.ರಾಜು ನಿರೂಪಿಸಿ, ಸ್ವಾಗತಿಸಿದರು. ರಂಗಭೂಮಿ ಕಲಾವಿದರಾದ ಶಿವಾಜಿ ರಾವ್, ಮಾರ್ತಾಂಡಪ್ಪ ಇದ್ದರು.

# ಬೌದ್ಧ ಧರ್ಮಕ್ಕೆ ಎಲ್ಲೆಡೆ ವಿಶೇಷ ಗೌರವ : ಮೋದೂರುತೇಜ



» ಚಳ್ಳಕೆರೆ

ಸಮಾಜದಲ್ಲಿ ಅನೇಕ ಧರ್ಮಗಳನ್ನು ನಾವೆಲ್ಲರೂ ಪಾಲಿಸುವ ಮೂಲಕ ಶಾಂತಿಯ ಪ್ರತಿಪಾದಕರಾಗಿದ್ದೇವೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಸಹ ಧಾರ್ಮಿಕ ವಿಚಾರಗಳಲ್ಲಿ ತಮ್ಮದೇಯಾದ ಕಠಿಣ ನಿರ್ಧಾರಗಳನ್ನು ಕೈಗೊಂಡಿದ್ದರು. ಹಲವಾರು ಧರ್ಮಗಳು ನಮ್ಮಲ್ಲಿದ್ದರೂ ಸಹ ಅಂಬೇಡ್ಕರ್ ಮಾತ್ರ ಅಹಿಂಸೆ ಮತ್ತು ಶಾಂತಿಯನ್ನು ಪ್ರತಿಪಾದಿಸುವ ಬೌದ್ಧ ಧರ್ಮವನ್ನು ಸ್ವೀಕರಿಸಿದ್ದು, ನಾವೆಲ್ಲರೂ ಅಹಿಂಸೆ ಮತ್ತು ಶಾಂತಿ ಪ್ರತಿಪಾದಕರಾಗೋಣವೆಂದು ಲೇಖಕ ಹಾಗೂ ಕಥೆಗಾರ ಮೋದೂರುತೇಜ ತಿಳಿಸಿದರು. ನನ್ನಿವಾಳ ಗ್ರಾಮದ ಬುದ್ದ ಮನೆಯಲ್ಲಿ ಬುದ್ದಬೆಳಕು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಸಮಾಜದಲ್ಲಿ ಯಾವುದೇ ವ್ಯಕ್ತಿಯಾದರೂ ತನ್ನದೇಯಾದ ಧಾರ್ಮಿಕ ವಿಚಾರಗಳನ್ನು ಅಳವಡಿಸಿಕೊಳ್ಳಬಹುದಾಗಿದೆ. ಆದರೆ, ಬೇರೆಯವರಿಗೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸಬೇಕಿದೆ. ನೆಮ್ಮದಿ ನೀಡುವ ಬೌದ್ಧ ಧರ್ಮವನ್ನು ಎಲ್ಲರೂ ಗೌರವಿಸುತ್ತಾರೆ ಎಂದರು.

# ಅಂಗಡಿಗಳು, ಬಾರ್ & ರೆಸ್ಟೋರೆಂಟ್‌ಗಳಿಗೆ ಭೇಟಿ ನೀಡಿ ಕೋಟ್ಪಾ-2003ರ ಕಾಯ್ದೆಯ ತಂಬಾಕು ಕಾರ್ಯಾಚರಣೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಕೋಟ್ಪಾ-2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಈಚೆಗೆ ಹೊಸದುರ್ಗ ತಾಲ್ಲೂಕಿನ ಹ್ಯಾಂಡ್ ಪೋಸ್ಟ್, ಮತ್ತೋಡು, ಕಾರೇಹಳ್ಳಿ ಮತ್ತು ಚಳ್ಳಕೆರೆ ನಗರ ಪ್ರದೇಶಗಳಲ್ಲಿ ಹಾಗೂ ನಾಯಕನಹಟ್ಟಿ ಪಟ್ಟಣ ಪ್ರದೇಶದಲ್ಲಿ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಮತ್ತು ಬಾರ್ & ರೆಸ್ಟೋರೆಂಟ್‌ಗಳಿಗೆ ಭೇಟಿ ನೀಡಿ ದಾಳಿ ನಡೆಸಿ, ದಂಢ ವಿಧಿಸಿದೆ.

ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಹೆಚ್ಚರಿಸಿ ಜಾಗೃತಿಯನ್ನು ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್-4 ಅಡಿಯಲ್ಲಿ 51 ಕೇಸುಗಳನ್ನು ದಾಖಲಿಸಿ ರೂ. 4350 ದಂಡವನ್ನು ಮತ್ತು ಸೆಕ್ಷನ್-6ಎ ಅಡಿಯಲ್ಲಿ 25 ಕೇಸುಗಳನ್ನು ದಾಖಲಿಸಿ ರೂ. 1750 ದಂಡವನ್ನು ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ ಸಮಾಜ ಕಾರ್ಯಕರ್ತ ಕೆ.ಎಂ.ತಿಪ್ಪೇಸ್ವಾಮಿ, ಜಿಲ್ಲಾ ಸರ್ವೇಕ್ಷಣಾ ಘಟಕದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಿಶ್ವ, ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟೇಶ್,ಕಾರ್ಯಕ್ರಮ ವ್ಯವಸ್ಥಾಪಕ ಕಿರಣ್, ಹೊಸದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದರಾಮಪ್ಪ, ಮಲ್ಲಿಕಾರ್ಜುನ್, ಚಳ್ಳಕೆರೆ ಅಬಕಾರಿ ಸಬ್‌ಇನ್ಸ್‌ಪೆಕ್ಟರ್ ಎಸ್.ಹೆಚ್. ರೇಖಾ, ಆರೋಗ್ಯ ನಿರೀಕ್ಷಣಾಧಿಕಾರಿ ಅಮೃತ್ ರಾಜ್ ಸೇರಿದಂತೆ ಇದ್ದರು.




## ಪ್ರಮುಖ ಸುದ್ದಿ

# ಶಾಲಾ ಪ್ರಾರಂಭೋತ್ಸವಕ್ಕೆ ಸಿದ್ಧತೆ ಮಾಡಿಕೊಳ್ಳಲು ಸೂಚನೆ

» ಹೊಸದುರ್ಗ

ಹೊಸದುರ್ಗ ತಾಲೂಕಿನ ರಾಜ್ಯ ಪಠ್ಯಕ್ರಮದ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆಗಳು ಮೇ 29, 30ರಂದು ಶಾಲಾ ಪ್ರಾರಂಭೋತ್ಸವದ ಸಿದ್ಧತೆಗಳನ್ನು ಮಾಡಿಕೊಂಡು ಮೇ 31ರಂದು ಶಾಲಾ ಪ್ರಾರಂಭೋತ್ಸವ ಮಾಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ತಿಳಿಸಿದರು.

ಪಟ್ಟಣದ ತೋಟದ ರಾಮಯ್ಯ ಗಂಗಾಂಬಿಕೆ ಬಾಲಿಕಾ ಪ್ರೌಢಶಾಲೆಯ ಸಭಾಂಗಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಿಂದ ಗುರುವಾರ ಆಯೋಜಿಸಿದ್ದ ಶಾಲಾ ಪ್ರಾರಂಭೋತ್ಸವ ಕುರಿತ ಮುಖ್ಯ ಶಿಕ್ಷಕರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿ, ಶಿಕ್ಷಣ ಇಲಾಖೆಯ ಸೂಚನೆಯಂತೆ ಶಾಲಾ ಸ್ವಚ್ಛತಾ ಕಾರ್ಯ, ಸುರಕ್ಷತಾ ಕ್ರಮಗಳನ್ನು ಪರಿಶೀಲಿಸಬೇಕು. ತರಗತಿ, ಸಿಬ್ಬಂದಿ ಕೊಠಡಿ, ಶಾಲಾ ಮೈದಾನ, ನೀರಿನ ಟ್ಯಾಂಕ್, ಅಡುಗೆ ಕೋಣೆ, ಆಹಾರ ಧಾನ್ಯಗಳ ಸ್ವಚ್ಛತೆ ಮತ್ತು ಅಡುಗೆ ಪರಿಕರಗಳನ್ನು ಸ್ವಚ್ಛಗೊಳಿಸುವಂತೆ ಸೂಚಿಸಿದರು.ಮೇ 29ರಂದು ಶಿಕ್ಷಕರು ವರ್ಷದ ಶೈಕ್ಷಣಿಕ ಚಟುವಟಿಕೆಗಳ ಕುರಿತು ಶಾಲಾ, ತರಗತಿ, ಶಿಕ್ಷಕರ ವೇಳಾಪಟ್ಟಿ, ವಾರ್ಷಿಕ ಕ್ರಿಯಾಯೋಜನೆ, ಶಿಕ್ಷಕರು ಪಾಠ ಯೋಜನೆ ತಯಾರಿಸಿಕೊಳ್ಳುವುದು. ಶಾಲಾಭಿವೃದ್ಧಿ ಯೋಜನೆ, ಶಾಲೆ ಬಿಟ್ಟಿರುವ ಮಕ್ಕಳನ್ನು ಗುರುತಿಸಿ ವಿಶೇಷ ದಾಖಲಾತಿ ಮಾಡಿಕೊಳ್ಳಲು ಜಾಥಾ, ಪ್ರಭಾತ್ ಪೇರಿ, ಮನೆ ಭೇಟಿ ಮುಂತಾದ ಕ್ರಮಗಳನ್ನು ಹಮ್ಮಿಕೊಳ್ಳುವುದು. ಮೇ 31ರಂದು ಮಕ್ಕಳಿಗೆ ಸಿಹಿ ಊಟ ವಿತರಿಸಿ ಪ್ರಾರಂಭೋತ್ಸವ ಮಾಡಬೇಕು. ಶಾಲಾರಂಭದ ದಿನವೇ ಉಚಿತ ಪಠ್ಯಪುಸ್ತಕ ಮತ್ತು ಸಮವಸಗಳನ್ನು ವಿತರಿಸಬೇಕು. ಜೂ.1ರಿಂದ 30ರವರೆಗೆ ಸೇತುಬಂಧ ಕಾರ್ಯಕ್ರಮ ನಡೆಸಬೇಕು ಎಂದು ತಿಳಿಸಿದರು.



ಅಕ್ಷರ ದಾಸೋಹ ತಾಲೂಕು ಸಹಾಯಕ ನಿರ್ದೇಶಕ ಪರಮೇಶ್ವರಪ್ಪ ಮಾತನಾಡಿ, ತಾಲೂಕಿನಲ್ಲಿ ಅಕ್ಷರ ದಾಸೋಹ ಕೊಠಡಿ ದುರಸ್ತಿ ಮಾಡಲಾಗುವುದು. ಮೇ.31 ರಂದು ಬಿಸಿಯೂಟ ನೀಡುವ ಮೂಲಕ ಪ್ರಾರಂಭೋತ್ಸವ ಯಶಸ್ವಿಗೊಳಿಸಿ ಎಂದು ಶಿಕ್ಷಕರಿಗೆ ತಿಳಿಸಿದರು.

ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್, ಉಪಾಧ್ಯಕ್ಷ ತಿಪ್ಪೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ, ಬಿ ಆರ್ ಪಿ ರುದ್ರೇಶ್, ಶಿಕ್ಷಣ ಸಂಯೋಜಕ ಚಂದ್ರಶೇಖರ, ಯತೀಶ್ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಶಿಮುಲ್‌ನಿಂದ ಮೇವಿನ ಬೀಜಗಳ ಉಚಿತ ಮಿನಿ ಕಿಟ್ ವಿತರಣೆ

» ಚಿತ್ರದುರ್ಗ

ಹೈನು ಉತ್ಪಾದಕರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಕೇಂದ್ರ ಸರ್ಕಾರದ ಎನ್‌ಎಲ್‌ಎಂ ಯೋಜನೆಯ ಅನುದಾನದಡಿ ಎನ್‌ಡಿಡಿಬಿ ಹಾಗೂ ಕರ್ನಾಟಕ ಸಹಕಾರ ಹಾಲು ಮಹಾಮಂಡಳ ವತಿಯಿಂದ ಶಿಮುಲ್‌ಗೆ ರೂ.1.20 ಕೋಟಿ ಮೊತ್ತದ ಹಸಿರು ಮೇವಿನ ಬಿತ್ತನೆ ಬೀಜಗಳ ಹಂಚಿಕೆ ಮಾಡಲಾಗಿದೆ. ಹೈನು ರಾಸುಗಳ ಆರೋಗ್ಯ ಸುಧಾರಣೆ, ಉತ್ತಮ ಗುಣಮಟ್ಟದ ಹಾಲಿನ ಉತ್ಪಾದನೆಗೆ ಹಾಗೂ ಕಡಿಮೆ ವೆಚ್ಚದಲ್ಲಿ ಹೆಚ್ಚು ಹಾಲು ಉತ್ಪಾದನೆ ಮಾಡುವ ಮೂಲಕ ಹೈನುಗಾರಿಕೆಯಲ್ಲಿ ಹೆಚ್ಚಿನ ಲಾಭ ಪಡೆಯಲು ಹಾಲು ಉತ್ಪಾದಕರು ಹಸಿರು ಮೇವನ್ನು ಬೆಳೆಸಿ ಬಳಸುವುದು ಅತೀ ಮುಖ್ಯವಾಗಿರುತ್ತದೆ. ಕಳೆದ ಸಾಲಿನಲ್ಲಿ ತೀವ್ರ ಬರ ಪರಿಸ್ಥಿತಿ ಇದ್ದ ಹಿನ್ನಲೆಯಲ್ಲಿ ಮೇವಿನ ಲಭ್ಯತೆ ಕಡಿಮೆಯಾದ್ದರಿಂದ ದುಬಾರಿ ಬೆಲೆ ತೆತ್ತು ಮೇವನ್ನು ಖರೀದಿಸಿ ನಷ್ಟ ಅನುಭವಿಸಿದ ರೈತರಿಗೆ ನೆರವಾಗುವ ಉದ್ದೇಶದಿಂದ ಮುಂಗಾರು ಹಂಗಾಮು ಪ್ರಾರಂಭವಾಗುವ ಮುನ್ನ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ ವತಿಯಿಂದ ವಿವಿಧ ಮೇವಿನ ತಳಿಗಳ 3/5 ಕೆ.ಜಿ. ಕಿರು ಪೊಟ್ಟಣಗಳನ್ನು ರೈತರಿಗೆ ಉಚಿತವಾಗಿ ಪೂರೈಸಲು ನಿರ್ಧರಿಸಿದೆ. ಹಾಲು ಉತ್ಪಾದಕರ ಸಹಕಾರ ಸಂಘಗಳ ಹಾಲು ಶೇಖರಣೆ ಆಧಾರದ ಮೇಲೆ ಮಳೆ ಆಶ್ರಿತ ರೈತರು, ನೀರಾವರಿ ಹೊಂದಿರುವ ರೈತರನ್ನು ಗುರುತಿಸಿ ಯೋಜನೆಯ ನಿಯಮದಂತೆ ಮೇವಿನ ಬೀಜದ ಮಿನಿ ಕಿಟ್‌ಗಳನ್ನು ಹಂಚಿಕೆ ಮಾಡುವಂತೆ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಈಗಾಗಲೇ ಮಾರ್ಗಸೂಚಿ ಹೊರಡಿಸಲಾಗಿದೆ. 2024–25ನೇ ಸಾಲಿಗೆ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರುದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟಕ್ಕೆ 120 ಮೆಟ್ರಿಕ್ ಟನ್ ಬಹುಕಟಾವು ಜೋಳ ಸಿಎಸ್‌ಹೆಚ್–24ಎಮ್‌ಎಫ್=20ಎಮ್‌ಟಿ, ಸಿಎಸ್‌ಹೆಚ್–43ಎಮ್‌ಎಫ್=90ಎಂಟಿ, ಮೆಕ್ಕೆಜೋಳ ಜೆ177–0ಎಂಟಿ ಮೇವಿನ ಬಿತ್ತನೆ ಬೀಜ ಹಂಚಿಕೆಯಾಗಿದೆ. ಕೇಂದ್ರ ಸರ್ಕಾರದ ಎನ್,ಎಲ್,ಎಮ್ ಯೋಜನೆಯಡಿ ಒಕ್ಕೂಟಕ್ಕೆ ಹಂಚಿಕೆ ಮಾಡಲಾಗಿರುವ ಹಸಿರು ಮೇವಿನ ಬಿತ್ತನೆ ಬೀಜದ ಮಿನಿಕಿಟ್‌ಗಳನ್ನು ಹಾಲು ಉತ್ಪಾದಕರ ಸಹಾಕಾರ ಸಂಘಗಳ ಮೂಲಕ ಹಾಲು ಉತ್ಪಾದಕರಿಗೆ ಯೋಜನೆಯ ನಿಬಂಧನೆಯ ಅನುಸಾರ ಸಾಮಾನ್ಯ ವರ್ಗಕ್ಕೆ 70%, ಪ.ಜಾತಿ 20%, ಪ.ಪಂಗಡಕ್ಕೆ 10% ನಷ್ಟು, ಹಾಲು ಶೇಖರಣೆಯ ಆಧಾರದ ಮೇಲೆ ವಿತರಿಸಲು ಯೋಜಿಸಲಾಗಿದೆ.

### ಜಿಲ್ಲಾಮಟ್ಟದ ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆ– ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಕೀಟಜನ್ಯ ರೋಗ ನಿಯಂತ್ರಣ: ಜಾಗೃತಿ ಮೂಡಿಸಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಮಳೆ ಪ್ರಾರಂಭವಾಗಿದ್ದು, ಡೆಂಗೀ ಮತ್ತು ಇತರೆ ಕೀಟಜನ್ಯ ರೋಗಗಳ ನಿಯಂತ್ರಣಕ್ಕಾಗಿ ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಡೆಂಗೀ ಮತ್ತು ಚಿಕುಂಗುನ್ಯಾ ನಿಯಂತ್ರಣ ಮತ್ತು ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಬಗ್ಗೆ ಜಿಲ್ಲಾಮಟ್ಟದ ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಈ ಬಾರಿ ಹೆಚ್ಚಿನ ಮಳೆಯಾಗುವ ಸಂಭವವಿದ್ದು, ಮಳೆಗಾಲದಲ್ಲಿ ಡೆಂಗ್ಯೂ ಹಾಗೂ ಚಿಕುಂಗುನ್ಯಾದಂತಹ ಕೀಟಜನ್ಯ ರೋಗಗಳ ಸಂಖ್ಯೆ ಹೆಚ್ಚಾಗುವ ಸಂಭವವಿದ್ದು, ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಶಿಕ್ಷಕರ ಮೂಲಕ ಶಾಲಾ ಮಕ್ಕಳಿಗೆ ಹೆಚ್ಚಿನ ಅರಿವು ಮೂಡಿಸಬೇಕು. ಸಮುದಾಯದ ನಾಗರೀಕರು ಕೂಡ ತಮ್ಮ ಜವಾಬ್ದಾರಿ ಅರಿತು ತಮ್ಮ ಮನೆ ಹಾಗೂ ಸುತ್ತ–ಮುತ್ತಲಿನ ಸ್ಥಳಗಳು ಶುಭ್ರವಾಗಿರಿಸಿಕೊಂಡು ಸೊಳ್ಳೆಗಳ ಉತ್ಪತ್ತಿ ತಡೆಗಟ್ಟಬೇಕು. ಆ ಮೂಲಕ ಕೀಟಜನ್ಯ ರೋಗಗಳ ನಿಯಂತ್ರಣಕ್ಕೆ ಸಹಕರಿಸಬೇಕು ಎಂದು ಸಲಹೆ ನೀಡಿದರು.

ಡೆಂಗಿ ನಿಯಂತ್ರಣಕ್ಕಾಗಿ ವಿಶೇಷವಾಗಿ ಪ್ರಕರಣಗಳ ಸಂಖ್ಯೆ ಹೆಚ್ಚಾಗಿರುವ ಕಡೆ ಹಾಗೂ ಸ್ಲಂ ಏರಿಯಾಗಳಲ್ಲಿ ಜಾಗೃತಿ ಮೂಡಿಸಬೇಕು. ರೋಗ ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ರೋಗ ಬಾರದಂತೆ ಮುನ್ನೆಚ್ಚರಿಕೆ ಹಾಗೂ ಸಿದ್ಧತೆ ಕೈಗೊಳ್ಳುವುದು ಅತ್ಯುತ್ತಮ. ಹಾಗಾಗಿ ನಗರ ಪ್ರದೇಶಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಮೂಲಕ ಕಸ ವಿಲೇವಾರಿ ವಾಹನಗಳ ಮೂಲಕ ಜಾಗೃತಿ ಮೂಡಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಚರಂಡಿಗಳ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಶುದ್ಧ ಕುಡಿಯುವ ನೀರು ಹಾಗೂ ಶುಚಿತ್ವಕ್ಕೆ ಹೆಚ್ಚಿನ ಗಮನಹರಿಸಬೇಕು ಅಧಿಕಾರಿಗಳಿಗೆ ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶೀ ಮಾತನಾಡಿ, ಜಿಲ್ಲೆಯಲ್ಲಿ 2019ರಲ್ಲಿ 438 ಡೆಂಗ್ಯೂ ಪ್ರಕರಣಗಳು ವರದಿಯಾಗಿದ್ದವು. 2020ರಲ್ಲಿ 153 ಡೆಂಗೀ ಪ್ರಕರಣಗಳು, 2021ರಲ್ಲಿ 241 ಪ್ರಕರಣಗಳು, 2022ರಲ್ಲಿ 442 ಪ್ರಕರಣಗಳು, 2023ರಲ್ಲಿ 377 ಪ್ರಕರಣಗಳು, 2023ರ ಮೇ 15 ರವರೆಗೆ 91 ಪ್ರಕರಣಗಳು ಹಾಗೂ 2024ರ ಮೇ 15 ರವರೆಗೆ 192 ಪ್ರಕರಗಳು ಕಂಡುಬಂದಿವೆ. ಡೆಂಗೀ ನಿಯಂತ್ರಣಕ್ಕಾಗಿ ಮನೆ ಮನೆ ಲಾರ್ವಾ ಸಮೀಕ್ಷೆ ಮಾಡಲಾಗುತ್ತಿದೆ. ಪ್ರತಿ ಮನೆ–ಶಾಲೆಗಳಲ್ಲಿ ಈ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಹೈರಿಸ್ಕ್ ಪ್ರದೇಶಗಳಲ್ಲಿ ಲಾರ್ವಾಹಾರಿ ಮೀನು ಮರಿಗಳನ್ನು ಬಿಡುವ ವ್ಯವಸ್ಥೆ ಮಾಡಲಾಗುತ್ತಿದೆ ಎಂದರು.ಡೆಂಗೀ ಹಾಗೂ ಇತರೆ ಕೀಟಜನ್ಯ ರೋಗಗಳ ನಿಯಂತ್ರಣದಲ್ಲಿ ಇತರೆ ಇಲಾಖೆಗಳ ಸಹಭಾಗಿತ್ವ ಅಗತ್ಯವಾಗಿದೆ. ನಗರ ಪ್ರದೇಶಗಳಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಿಸಿ ನೀರು ನಿಲ್ಲದಂತೆ ಗುಂಡಿಗಳನ್ನು ಮುಚ್ಚಿಸಬೇಕು. ಅವಶ್ಯಕವಿದ್ದಾಗ ವ್ಯಾಪಕವಾಗಿ ಫಾಗಿಂಗ್ ಮಾಡಿಸುವುದು. ಕಸ ಸಂಗ್ರಹದ ಜೊತೆಗೆ ವಾಹನದಲ್ಲಿ ಧ್ವನಿವರ್ಧಕದ ಮೂಲಕ ಆರೋಗ್ಯ ಶಿಕ್ಷಣ ನೀಡಲು ಕ್ರಮಕೈಗೊಳ್ಳುವುದು. ಟೈರ್, ತೆಂಗಿನ ಚಿಪ್ಪುಗಳು, ಪ್ಲಾಸ್ಟಿಕ್ ಮುಂತಾದ ಘನತ್ಯಾಜ್ಯಗಳನ್ನು ತಕ್ಷಣವೇ ವಿಲೇವಾರಿ ಮಾಡುವುದು. ಚರಂಡಿಗಳ ಹೂಳೆತ್ತಿ ಸ್ವಚ್ಛ ಮಾಡಿ ನೀರು ಸರಾಗವಾಗಿ ಹರಿದುಹೋಗದಂತೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಿದರು. ಕಲ್ಲಿನ ಕ್ವಾರಿಗಳಲ್ಲಿನ ಗುಂಡಿಗಳಲ್ಲಿ ನೀರು ನಿಂತಾಗ ಅಲ್ಲಿ ಮಲೇರಿಯ ಸೊಳ್ಳೆಗಳು ಸಂತಾನೋತ್ಪತ್ತಿ ಮಾಡುವುದರಿಂದ ಆ ಗುಂಡಿಗಳ ಸೂಕ್ತ ನಿರ್ವಹಣೆಯನ್ನು ಗಪ್ಪಿ ಮತ್ತು ಗಾಂಬೂಸಿಯಾ ಮೀನುಗಳನ್ನು ಬಿಡುವುದು. ಇಲ್ಲವೇ ಆ ಗುಂಡಿಗಳನ್ನು ಮುಚ್ಚುವುದರ ಮೂಲಕ ಅಥವಾ ಸೂಕ್ತವಾದ ನಿರ್ವಹಣೆಯ ಮೂಲಕ ಸೊಳ್ಳೆಗಳು ಅಭಿವೃದ್ಧಿಯಾಗದಂತೆ ನೋಡಿಕೊಳ್ಳಬೇಕು. ಗಣಿಗಾರಿಕೆ ಪರವಾನಿಗೆಯನ್ನು ಪಡೆಯುವ ಸಂದರ್ಭದಲ್ಲಿ ಸೂಕ್ತ ನಿರ್ವಹಣೆಯ ಷರತ್ತನ್ನು ವಿಧಿಸಬೇಕು ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು, ಜಿಲ್ಲೆಯಲ್ಲಿನ ಅನುಪಯುಕ್ತ ಕಲ್ಲು ಕ್ವಾರಿಗಳ ಸುತ್ತ ಪೆನ್ಸಿಂಗ್ ಹಾಕಬೇಕು ಎಂದು ತಾಕೀತು ಮಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ರಾಷ್ಟ್ರೀಯ ಡೆಂಗೀ ದಿನದ ಈ ಬಾರಿಯ ಘೋಷವಾಕ್ಯ ಸಮುದಾಯದೊಂದಿಗೆ ಸೇರಿ ಡೆಂಗೀ ಜ್ವರವನ್ನು ನಿಯಂತ್ರಿಸೋಣ ಎಲ್ಲ ಹಂತಗಳಲ್ಲಿಯೂ ಚಟುವಟಿಕೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಡೆಂಗೀ ನಿಯಂತ್ರಣಕ್ಕಾಗಿ ಸಮುದಾಯದ ಸಹಭಾಗಿತ್ವ ಅಗತ್ಯವಾಗಿದೆ ಎಂದರು.ಇದೇ ಸಂದರ್ಭದಲ್ಲಿ ಡೆಂಗೀ ಮತ್ತು ಇತರೆ ಕೀಟಜನ್ಯ ರೋಗಗಳ ಕುರಿತು ಜಾಗೃತಿ ಮೂಡಿಸುವ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಜಿಲ್ಲಾಶಸ್ತ್ರಚಿಕಿತ್ಸಕಡಾ.ಎಸ್.ಪಿ.ರವೀಂದ್ರ, ಜಿಲ್ಲಾಆಯುಷ್‌ಅಧಿಕಾರಿಡಾ.ಚಂದ್ರಕಾಂತ್ ನಾಗಸಮುದ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗೀರೀಶ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ನಗರಸಭೆಯಿಂದ ಪ್ಲಾಸ್ಟಿಕ್ ರೈಡ್

**ಚಳ್ಳಕೆರೆ:** ರಾಜ್ಯ ಸರ್ಕಾರ ಅಂಗಡಿ, ಹೋಟೆಲ್, ಬೇಕರಿ, ಹೂವಿನ ಅಂಗಡಿ ಹಾಗೂ ಬೀದಿಬದಿ ವ್ಯಾಪಾರಸ್ಥರು ತಮ್ಮ ಸಾಮಾಗ್ರಿಗಳನ್ನು ಪ್ಲಾಸ್ಟಿಕ್ ಕವರ್‌ಗಳಲ್ಲಿ ನೀಡಬಾರದು ಎಂದು ಕಡ್ಡಾಯವಾಗಿ ತಿಳಿಸಿ ಪ್ಲಾಸ್ಟಿಕ್ ಬಳಕೆ ನಿಷೇದಿಸಿದ್ದರು ಇವುಗಳ ಬಳಕೆ ಪುನರಾಂಭವಾಗಿದೆ. ಪ್ಲಾಸ್ಟಿಕ್ ಕವರ್ ಬಳಸುವವರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಆರೋಗ್ಯ ನಿರೀಕ್ಷಕ ಸುನೀಲ್‌ಕುಮಾರ್ ತಿಳಿಸಿದರು. ಜಿಲ್ಲಾಧಿಕಾರಿಗಳ ಸೂಚನೆ ಹಾಗೂ ಪೌರಾಯುಕ್ತ ಜೀವನ್‌ಕಟ್ಟಿಮನಿ ಮಾರ್ಗದರ್ಶನದಲ್ಲಿ ಗುರುವಾರ ಬಳ್ಳಾರಿ ರಸ್ತೆಯ ವಿವಿಧ ಅಂಗಡಿ, ಬೇಕರಿಗಳಿಗೆ ಭೇಟಿ ನೀಡಿ ಅಲ್ಲಿದ್ದ ಪ್ಲಾಸ್ಟಿಕ್ ಕವರ್‌ಗಳನ್ನು ವಶಪಡಿಸಿಕೊಂಡು ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದರು. ಇದೇ ಸಂದರ್ಭದಲ್ಲಿ ನಗರದಲ್ಲಿರುವ ಎಲ್ಲಾ ಅಂಗಡಿ ಮಾಲೀಕರು ಕಡ್ಡಾಯವಾಗಿ ತಮ್ಮ ಉದ್ಯಮ ಪರವಾನಿಗೆಯನ್ನು ನವೀಕರಣಗೊಳಿಸಿಕೊಳ್ಳುವಂತೆ ಸೂಚನೆ ನೀಡಲಾಯಿತು.



## ತೋಟಗಾರಿಕೆ ತರಬೇತಿ


» ದಾವಣಗೆರೆ

ತೋಟಗಾರಿಕೆ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಯನ್ನು ಚಿತ್ರದುರ್ಗ ಜಿಲ್ಲೆಯ ಐಯ್ಯನಹಳ್ಳಿ ತೋಟಗಾರಿಕೆ ಕ್ಷೇತ್ರದಲ್ಲಿ ಆಯೋಜಿಸಲಾಗಿದೆ.

ತರಬೇತಿಯು 2024 ರ ಜುಲೈನಿಂದ 2025 ರ ಮಾರ್ಚ್‌ವರೆಗೆ ನಡೆಯಲಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಗಳನ್ನು ಮೇ.23 ರಿಂದ ಜೂನ್ 3 ರವರೆಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ದಾವಣಗೆರೆ ಇವರ ಕಚೇರಿಯ ಇಲಾಖಾ ವೆಬ್‌ಸೈಟ್ ತಿತಿತಿ.ಠಡಿಣುಛಿಣಾಟಣಣಡಿಜ.ಇಚಿಡಿ.ಟುಛಿಎಟ ನಲ್ಲಿ ಪಡೆದು. ಭರ್ತಿ ಮಾಡಿದ ಅರ್ಜಿಗಳನ್ನು ನಿಗಧಿತ ಶುಲ್ಕದೊಂದಿಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು.





# ಧ್ಯಾನಕ್ಕೊಂದ ಅರ್ಥ ನೀಡಿದ ಬುದ್ಧ





ಮೌನಕ್ಕೊಂದು ಮಾತು ಕಲಿಸಿದ ಮಹಾವೀರ.......
ಸಮಾಜವನ್ನೇ ಸಾಹಿತ್ಯವಾಗಿಸಿದ ವ್ಯಾಸ.....
ಯೋಗವನ್ನೇ ಆರೋಗ್ಯವಾಗಿಸಿದ ಪತಂಜಲಿ.......
ಆಕಾಶ ಅಲೆದಾಡಿದ ಆರ್ಯಭಟ......
ತಂತ್ರಕ್ಕೊಂದು ಶಕ್ತಿ ನೀಡಿದ ಚಾಣಕ್ಯ.....
ಸಾಮ್ರಾಜ್ಯದ ಸರದಾರನಾದರೂ ಪ್ರಾಣಹಾನಿಗೆ ಮಿಡಿದ ಅಶೋಕ.......
ಧಾರ್ಮಿಕ ನಂಬಿಕೆಗಳಿಗೆ ನೀರೆರೆದ ಶಂಕರಾಚಾರ್ಯ.....
ಪ್ರೇಮ ಪತ್ರಗಳಿಗೆ ಜೀವ ತುಂಬಿದ ಕಾಳಿದಾಸ....
ಸಮಾನತೆಗೊಂದು ಸ್ಪರ್ಶ ಕೊಟ್ಟ ಬಸವಣ್ಣ.....
ಸ್ಥಿತ ಪ್ರಜ್ಞೆಗೆ ಉದಾಹರಣೆಯಾದ ಅಕ್ಕ ಮಹಾದೇವಿ.....
ಮನುಷ್ಯ ಜನ್ಮ ಜಾಲಾಡಿದ ಅಲ್ಲಮ............
ಮಾತನ್ನೊಂದು ಮಂತ್ರವಾಗಿಸಿದ ವಿವೇಕಾನಂದ.......
ಭಕ್ತಿಯ ಪರಾಕಾಷ್ಠೆ ತಲುಪಿದ ಪರಮಹಂಸ......
ಗುರುಗಳಿಗೆ ಗುರುವಾದ ರಮಣ.....
ಭಜನೆಗಳಿಗೆ ಭಾವ ತುಂಬಿದ ಮೀರಾ ಬಾಯಿ......
ಶಿಕ್ಷಣದ ಮಹತ್ವ ಸಾರಿದ ಸಾವಿತ್ರಿ ಬಾಯಿ ಪುಲೆ,.....
ಕವಿತ್ವವನ್ನು ಜನಪರವಾಗಿಸಿದ ರವೀಂದ್ರನಾಥ ಟಾಗೋರ್ .......
ಸಸ್ಯಗಳ ಭಾವನೆಗಳಿಗೆ ಕಿವಿಯಾದ ಜಗದೀಶ್ ಚಂದ್ರ ಬೋಸ್.....
ಹೋರಾಟಕ್ಕೊಂದು ನೆಲೆ ನೀಡಿದ ಗಾಂಧಿ......
ಮಾನವೀಯತೆಯನ್ನೇ ಉಸಿರಾಡಿದ, ಅಧ್ಯಯನವನ್ನೇ ಬೆಳಕಾಗಿಸಿದ ಅಂಬೇಡ್ಕರ್........
ದೇಶ ಭಕ್ತಿಗೆ ಸ್ಫೂರ್ತಿಯಾದ ಭಗತ್ ಸಿಂಗ್......
ಸ್ವಾತಂತ್ರ್ಯಕ್ಕೇ ಸಮರ್ಪಿತನಾದ ಸುಭಾಷ್........
ಸೇಡನ್ನು ಸಹ್ಯವಾಗಿಸಿದ ಉದೋಮ್ ಸಿಂಗ್.........
ಕ್ರೀಡೆಯ ದೈವಿಕ ಸಾಧನೆಗೆ ನೆನಪಾಗುವ ಹಾಕಿ ಮಾಂತ್ರಿಕ ಧ್ಯಾನ್ ಚಂದ್...
ಉದ್ಯಮವನ್ನೇ ಅಭಿವೃದ್ಧಿಯಾಗಿಸಿದ ಜೆಮ್ ಶೆಡ್ ಜೀ ಟಾಟಾ.....
ಸರಳತೆಗೆ ಸಂಕೇತವಾದ ಶಾಸ್ತ್ರಿ.......
ಚಿಂತನೆಗೆ ಚಿಗುರೊಡೆಸಿದ ಲೋಹಿಯಾ......
ಪ್ರಕೃತಿಯನ್ನೇ ಅಕ್ಷರಕ್ಕಿಳಿಸಿದ ಕುವೆಂಪು.........
ಸೇವೆಯನ್ನೇ ಬದುಕಾಗಿಸಿದ ತೆರೇಸಾ..........
ಅತಿರೇಕದ ಆನಂದವನ್ನು ಉಣಬಡಿಸಿದ ಓಶೋ.......ದೇವರನ್ನು ಕಲ್ಲಾಗಿಸಿದ ಪೆರಿಯಾರ್.....
ಆಧುನಿಕ ಭಾರತದ ಶಿಲ್ಪಿಯಾದ ನೆಹರು.....
ವಿಶ್ವ ಗುರುವಿಗೆ ಹತ್ತಿರದ ಚಿಂತಕ ಜಿಡ್ಡು ಕೃಷ್ಣಮೂರ್ತಿ.....
ಅಧಿಕಾರವನ್ನೇ ಸಾಮಾನ್ಯವಾಗಿಸಿದ ಮಾಣಿಕ್ ಸರ್ಕಾರ್......
ವಿಶ್ವ ಮಾನವ ಪ್ರಜ್ಞೆಯ ಕುವೆಂಪು.......
ಮುಗ್ಧತೆಯನ್ನೇ ಮಾತನಾಡಿಸಿದ ಕಲಾಂ........
16 ವರ್ಷ ಉಪವಾಸ ಸತ್ಯಾಗ್ರಹ ಮಾಡಿ ಇತಿಹಾಸ ಸೃಷ್ಟಿಸಿದ ಶರ್ಮಿಳಾ ಇರೋಂ....
ಆಧ್ಯಾತ್ಮವನ್ನೇ ಕಾಯಕವಾಗಿಸಿ ಸಾವಿಗೆ ಸವಾಲಾದ ಸಿದ್ದಗಂಗೆಯ ಶಿವಣ್ಣ............
ಈ ಕ್ಷಣದಲ್ಲಿ ನೆನಪಾದ ಕೆಲವು ವಿಶಿಷ್ಟ ವಿಶೇಷ ಮಾನವರು.....
ಭಾರತದ ಮಟ್ಟಿಗೆ ಎಲ್ಲಾ ಕ್ಷೇತ್ರಗಳಲ್ಲೂ ಅದ್ಭುತ ಸಾಧನೆ ಮಾಡಿದ ಅನೇಕರಿದ್ದಾರೆ. ಇದು ಕೇವಲ ಸಾಂಕೇತಿಕ......
ನಿಮ್ಮ ನೆನಪುಗಳಲ್ಲಿ ಮೂಡುವ ಇನ್ನೂ ಕೆಲವು ಸಾಧಕರನ್ನು ಇಲ್ಲಿ ಸ್ವಾಗತಿಸುತ್ತಾ........
ಇಂದಿನ ಮಾಧ್ಯಮಗಳ ವಿಕೃತ ಸುದ್ದಿಗಳಿಗಿಂತ ನಮ್ಮ ಮಕ್ಕಳಿಗೆ ಕನಿಷ್ಠ ಈ ಸಾಧಕರನ್ನು ಮತ್ತೆ ಮತ್ತೆ ನೆನಪಿಸುವ ಒಂದು ಪ್ರಯತ್ನ ಮಾಡುತ್ತಲೇ ಇರೋಣ.....ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.ಜನರ ಜೀವನಮಟ್ಟ ಸುಧಾರಣೆಯ 'ರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ರೋವರ್ಸ್ ಅಂಡ್ ರೇಂಜರ್ಸ್ ಪದಕ ತರಬೇತಿ

» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಶಾಲಾ, ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳಿಗೆ ಸಮಾಜ ಮುಖಿ ಚಟುವಟಿಕೆಗಳಿಗೆ ಪ್ರೇರಣೆ ನೀಡಲು ಸ್ಕೌಟ್ಸ್ ಮತ್ತು ಗೈಡ್ಸ್‌ನಂತರ ಸಂಸ್ಥೆಗಳಿಂದ ಸಾಧ್ಯವಾಗಿದೆ. ವಿದ್ಯಾರ್ಥಿಗಳು ಇಂತಹ ಸಂಸ್ಥೆಗಳ ಸೇವಾ ಚಟುವಟಿಕೆಗಳಲ್ಲಿ ತೊಡಗಿಕೊಂಡು ಸಮಾಜದ ಹಿತಕ್ಕಾಗಿ ಕಾರ್ಯನಿರ್ವಹಿಸಬೇಕೆಂದು ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಬಿ.ಎಸ್.ಮಂಜುನಾಥ ತಿಳಿಸಿದರು.ಕಾಲೇಜು ಆವರಣದಲ್ಲಿ ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಚಿತ್ರದುರ್ಗ ರೋವರ್ಸ್ ರೇಂಜರ್ಸ್ ವಿಭಾಗದಿಂದ ಆಯೋಜಿಸಿದ್ದ ರೋವರ್ಸ್ ಅಂಡ್ ರೇಂಜರ್ಸ್ ಪದಕ ತರಬೇತಿ ಮತ್ತು ನಿಪುಣ ಪರೀಕ್ಷೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಎರಡು ದಿನಗಳ ಕಾಲ ನಡೆಯುವ ಈ ನೈಪುಣ್ಯತೆ ಶಿಬಿರದ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆಯುವತ್ತ ಮುಂದಾಗಬೇಕೆಂದರು

.ಪ್ರಾಸ್ತಾವಿಕವಾಗಿ ಮಾತನಾಡಿದ ದೈಹಿಕ ಶಿಕ್ಷಣ ನಿರ್ದೇಶಕ, ಜಿಲ್ಲಾ ನೋಡಲ್ ಅಧಿಕಾರಿ ಎಚ್.ತಿಪ್ಪೇಸ್ವಾಮಿ, ವಿದ್ಯಾರ್ಥಿಗಳು ಇಂತಹ ಶಿಬಿರಗಳಲ್ಲಿ ಪೂರ್ಣಪ್ರಮಾಣದಲ್ಲಿ ಪಾಲ್ಗೊಂಡು ಯಶಸ್ವಿಯಾದರೆ ಅವರ ಭವಿಷ್ಯದ ಬದುಕು ಉತ್ತಮವಾಗಿರುತ್ತದೆ. ಕಾರಣ, ರಾಜ್ಯಪಾಲರ ಪ್ರಮಾಣ ಪತ್ರವನ್ನು ಪಡೆಯಲು ನೀವು ಅರ್ಹರಾಗುತ್ತೀರ, ಉದ್ಯೋಗಾವಕಾಶವೂ ಸಹ ಸುಲಭವಾಗಿ ನಿಮ್ಮ ಕೈಸೇರುತ್ತದೆ ಇಂತಹ ಸುವರ್ಣಾವಕಾಶದ ಸದುಪಯೋಗ ಎಲ್ಲರಿಗೂ ದೊರೆಯಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.ರೋವರ್ಸ್‌ಅಂಡ್‌ರೇಂಜರ್ಸ್‌ವಿಭಾಗದ ಮುಖ್ಯಸ್ಥೆ ಡಾ.ಲೀಲಾವತಿ, ಸಹಪ್ರಾಧ್ಯಾಪಕ ಡಾ.ಆರ್.ಗಂಗಾಧರ, ಪ್ರೊ.ಗಿರೀಶ್, ಜಗನ್ನಾಥ, ಜಿಲ್ಲಾಸಂಘಟಕ ಜಿ.ವಿ.ಪಾಟೀಲ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಹಗವಹಿಸಿದ್ದರು.



## ಮಾದಿಗ ಸಮುದಾಯ ಅಭಿವೃದ್ದಿ ಬೆಳಕು ಕಾಣಲು ಬೌದ್ಧ ಧರ್ಮದ ಸಿದ್ದಂತಾಗಳನ್ನು ಅಳವಡಿಸಿಕೊಳ್ಳಿ

» **ಚಳ್ಳಕೆರೆ**

ರಾಷ್ಟ್ರದಕ್ಕೆ ಸಂವಿಧಾನ ಕೊಡುಗೆ ನೀಡಿದ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹಿಂದೂ ಧರ್ಮವನ್ನು ತ್ಯಜಿಸಿ ಬೌದ್ಧ ಧರ್ಮವನ್ನು ಸ್ವೀಕರಿಸಿರುವ ಮೂಲಕ ಬುದ್ಧನಅನುಯಾಯಿಯಾದರು. ಯಾರು ಬೌದ್ಧ ಧರ್ಮವನ್ನು ಸ್ವೀಕರಿಸುತ್ತಾರೋ ಅವರಲ್ಲಿ ಶಾಂತಿ, ನೆಮ್ಮದಿ ತಾನಾಗಿಯೇ ನೆಲೆಸುತ್ತದೆ. ರಾಜ್ಯದ ಅತಿದೊಡ್ಡ ಸಮುದಾಯದ ಮಾದಿಗ ಸಮುದಾಯ ಬೌದ್ಧ ಧರ್ಮವನ್ನು ಸ್ವೀಕರಿಸುವ ಮೂಲಕ ಉತ್ತಮ ಬದುಕು ರೂಪಿಸಿಕೊಳ್ಳಬೇಕೆಂದು ಮಾದಿಗ ಸಮುದಾಯದ ವಿಚಾರವಾದಿ ಹಾಗೂ ಕರ್ನಾಟಕ ರಾಜ್ಯ ಮಾದಿಗ ಸಾಂಸ್ಕೃತಿಕ ಸಂಘದ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ.ಮಹೇಶ್ ತಿಳಿಸಿದರು.

ಅವರು, ನನ್ನಿವಾಳ ಗ್ರಾಮದಲ್ಲಿ ಸಮುದಾಯದ ಮುಖಂಡ ಹಾಗೂ ಶಾತವಾಹನ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹಮ್ಮಿಕೊಂಡಿದ್ದ ಬುದ್ಧಪೂರ್ಣಿಮೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ತಹಶೀಲ್ದಾರ್ ಹಿರೇಹಳ್ಳಿ ಮಲ್ಲಿಕಾರ್ಜುನ್, ನಾಗರಾಜು, ಬಸವರಾಜು, ಮೈತ್ರಿದ್ಯಾಮಣ್ಣ ಮುಂತಾದವರು ಉಪಸ್ಥಿತರಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T